Job No.1352/83 12 x 2


**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ**

# ಅಲ್ಪಸಂಖ್ಯಾತರ ನಿರ್ದೇಶನಾಲಯ

**ನಂ.16 ಸಿ, ಮೌಲಾನಾ ಆಜಾದ್ ಭವನ, ಅಲ್ಪಸಂಖ್ಯಾತರ ನಿರ್ದೇಶನಾಲಯ, ಮಿಲ್ಲರ್ಸ್ ಟ್ಯಾಂಕ್ ಬೆಡ್ ರಸ್ತೆ, ವಸಂತ ನಗರ, ಬೆಂಗಳೂರು–560052. ದೂರವಾಣಿ: 080–22864212.**

**ಫ್ಯಾಕ್ಸ್: 080–22863618 Email:directorgokdom@gmail.com**

**Web: https://dom.karnataka.gov.in Help Line No: 8277799990**


**ಸಂ: ಅಸಂನಿ/ಅ/ವಿದ್ಯಾಸಿರಿ/ಸಿಆರ್– 44/2022–23** **ದಿನಾಂಕ: 17.09.2022**

## ಪ್ರಕಟಣೆ

2022–23ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಅರ್ಜಿ ಆಹ್ವಾನಿಸುವ ಕುರಿತು.

**2022–23ನೇ ಸಾಲಿನ ವಿದ್ಯಾಸಿರಿ ಯೋಜನೆಯಡಿ ಅರ್ಜಿ ಸಲ್ಲಿಸಬೇಕಾದ ದಿನಾಂಕ: 19.09.2022 ರಿಂದ 20.10.2022 ರ ಸಂಜೆ 5.30 ಗಂಟೆಯೊಳಗೆ.**

ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ವಿದ್ಯಾರ್ಥಿಗಳಿಗೆ ಯಾವುದೇ ಇಲಾಖೆಯ ಸರ್ಕಾರಿ/ಅನುದಾನಿತ ವಿದ್ಯಾರ್ಥಿನಿಲಯ ಹಾಗೂ ವಸತಿ ಕಾಲೇಜುಗಳಲ್ಲಿ ಪ್ರವೇಶ ದೊರೆಯದೆ ಹಾಗೂ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮುಂದುವರೆಸಲು ಅನುಕೂಲವಾಗುವಂತೆ ಊಟ ಮತ್ತು ವಸತಿ ಸೌಲಭ್ಯಕ್ಕೆ ಸಹಾಯವನ್ನು ಒದಗಿಸಲು ಪ್ರತಿ ತಿಂಗಳಿಗೆ ರೂ.1,500/– ರಂತೆ ಶೈಕ್ಷಣಿಕ ಅವಧಿಯ 10 ತಿಂಗಳಿಗೆ (ಅನುದಾನ ಲಭ್ಯತೆಯನುಸಾರ)ಒಟ್ಟು ರೂ.15,000/– ಗಳನ್ನು ಸಂಬಂಧಪಟ್ಟ ವಿದ್ಯಾರ್ಥಿಗಳ ಬ್ಯಾಂಕ್‌ಖಾತೆಗೆ ಆನ್‌ಲೈನ್ ಮುಖಾಂತರ ಜಮಾ ಮಾಡಲಾಗುವುದು. ಈ ಸೌಲಭ್ಯವನ್ನು ಪಡೆದುಕೊಳ್ಳಲು ಸೇವಾಸಿಂಧು ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಎಲ್ಲಾ ದಾಖಲೆಗಳ ಸಹಿತ ಸೇವಾಸಿಂಧು **https://sevasindhu.karnataka.gov.in** ಮುಖಾಂತರ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ಸಂಖ್ಯೆ: 8277799990 ಇಲಾಖಾ **Website: https://dom.karnataka.gov.in** ಸಂಪರ್ಕಿಸಬಹುದು.

**ಸಹಿ/– ನಿರ್ದೇಶಕರು,**

**ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು.**